ಆಯುಕ್ತರು
ಕಾರ್ಮಿಕ ಇಲಾಖೆ

ಕರ್ನಾಟಕ ಸರ್ಕಾರ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ:080 2975 3078
ಇಮೇಲ್ : labour.commissioner42@gmail.com

**ಸಂಖ್ಯೆ:** ಕೆಎಸ್‌ಸಿಎಲ್‌ಇಪಿಎಸ್/ಸಿಎಲ್-05/ಸಿಆರ್-40/2023-24 **ದಿನಾಂಕ:**05 /02/2024

## : ಸುತ್ತೋಲೆ :

**ವಿಷಯ:** ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕರ್ನಾಟಕ ನಿಯಮಗಳನ್ವಯ ಮಕ್ಕಳು ಬಾಲ ನಟ/ನಟಿಯಾಗಿ ನಟನಾ ಕೆಲಸ ಮಾಡಲು ಇರುವ ಕಾನೂನಾತ್ಮಕ ಅಂಶಗಳು ಹಾಗೂ ಅನುಷ್ಠಾನ ಕುರಿತು.

**ಉಲ್ಲೇಖ:** ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ನಿಯಮಗಳು(ಕರ್ನಾಟಕ)ಗಳ ಅನುಷ್ಠಾನ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ತಿದ್ದುಪಡಿ ಕಾಯ್ದೆ,2016 ರನ್ವಯ ಮಕ್ಕಳ ಶಿಕ್ಷಣದ ಹಕ್ಕಿಗೆ ಮಾರಕವಾಗದಂತೆ ಬಾಲ ನಟ/ನಟಿಯಾಗಿ ನಟನಾ ಕೆಲಸ ನಿರ್ವಹಿಸುವ ಚಟುವಟಿಕೆಗಳನ್ನು ಹೊರತುಪಡಿಸಿ, ಕಾಯ್ದೆಯು ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಹಾಗೂ ಕಾಯ್ದೆಯು 14-18ರ ವಯಸ್ಸಿನ ಕಿಶೋರ ಕಾರ್ಮಿಕರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕಿಶೋರಾವಸ್ಥೆಯ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ತಪ್ಪಿತಸ್ಥ ಮಾಲಿಕರಿಗೆ 6 ತಿಂಗಳಿನಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ, ರೂ.20,000/- ರಿಂದ ರೂ.50.000/- ರವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ.

ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕರ್ನಾಟಕ ನಿಯಮಗಳು '2ಸಿ' ರಲ್ಲಿ ಒಬ್ಬ ಕಲಾವಿದನಾಗಿ ಕೆಲಸ ಮಾಡಬೇಕಾದ ಮಗು(1) ಕಲಂ 3ರ ನಿಬಂಧನೆಗಳನ್ವಯ ಈ ಕೆಳಗಿನ ಪರಿಸ್ಥಿತಿಗಳಿಗೆ/ನಿಯಮಗಳಿಗೆ ಒಳಪಟ್ಟಂತೆ ಮಗು ಕಲಾವಿದನಾಗಿ ಕೆಲಸ ಮಾಡಲು ಅನುಮತಿಸಬಹುದಾಗಿದೆ ಅವುಗಳು ಈ ಕೆಳಕಂಡಂತಿವೆ;

(a) ಯಾವುದೇ ಮಗುವನ್ನು ಒಂದು ದಿನದಲ್ಲಿ 5 ಗಂಟೆಗಳಿಗಿಂತ ಹೆಚ್ಚಿನ ಅವಧಿಗೆ ನಟನಾ ಕೆಲಸಕ್ಕೆ ನಿಯೋಜಿಸುವಂತಿಲ್ಲ ಮತ್ತು ವಿಶ್ರಾಂತಿ ಇಲ್ಲದೆ 3 ಗಂಟೆಗಳಿಗಿಂತ ಹೆಚ್ಚು ಕೆಲಸ ಮಾಡಿಸುವಂತಿಲ್ಲ.

(b) ಶ್ರವಣ ಮತ್ತು ದೃಶ್ಯ ಮಾದ್ಯಮದ ಯಾವುದೇ ನಿರ್ಮಾಪಕರು ನಿರ್ಮಿಸಿದ ಅಥವಾ ಯಾವುದೇ ವಾಣಿಜ್ಯ ಪರ ಕಾರ್ಯಕ್ರಮದಲ್ಲಿ ಮಗು ಭಾಗವಹಿಸುವುದಿದ್ದರೆ ಆ ಚಟುವಟಿಕೆ ನಡೆಯುವ ಪ್ರದೇಶದ ಜಿಲ್ಲಾ ದಂಡಾಧಿಕಾರಿಗಳ ಪೂರ್ವಾನುಮತಿ ಪಡೆದು ಭಾಗವಹಿಸುವಂತೆ ಮಾಡುವುದು ಮತ್ತು ಸದರಿ ಚಟುವಟಿಕೆ ಪ್ರಾರಂಭಿಸುವ ಪೂರ್ವದಲ್ಲಿ ನಮೂನೆ 'ಸಿ' ಯಲ್ಲಿ ಜಿಲ್ಲಾ ದಂಡಾಧಿಕಾರಿಗೆ ಮುಚ್ಚಳಿಕೆ ಪತ್ರ ಸಲ್ಲಿಸುವುದು ಮತ್ತು ಭಾಗವಹಿಸುವ ಮಕ್ಕಳ ಪಟ್ಟಿ ಪೋಷಕರ ಅಥವಾ ಪಾಲಕರ ಒಪ್ಪಿಗೆ ಪತ್ರಸಲ್ಲಿಸುವುದು.

- ಮಗುವಿನ ಸಂರಕ್ಷತೆಗೆ ಸಂಬಂಧಿಸಿದಂತೆ, ನಿರ್ಮಾಪಕರ ಅಥವಾ ಸಮಾರಂಭದ ಆಯೋಜಕರ ಹೆಸರುಗಳನ್ನು ಒದಗಿಸುವುದು.
- ಮಕ್ಕಳನ್ನು ಬಳಸಿ ಸಂಪೂರ್ಣ ಚಿತ್ರೀಕರಣ ಮಾಡುವ ಸಂದರ್ಭದಲ್ಲಿ ಮಕ್ಕಳ ದುರುಪಯೋಗ ಪ್ರಕರಣ, ನಿರ್ಲಕ್ಷ್ಯ ಅಥವಾ ಶೋಷಣೆ ನಡೆಯದಂತೆ ಸೂಕ್ತ ಮುಂಜಾಗ್ರತ ಕ್ರಮಗಳನ್ನು ಕೈಗೊಂಡಿರಬೇಕೆಂದು ಚಲನಚಿತ್ರಗಳ ಅಥವಾ ದೂರದರ್ಶನದ ಪ್ರದರ್ಶನದ ಹಕ್ಕು ನಿರಾಕರಣೆಗೆ ಒಳಪಟ್ಟಿದೆ ಎಂಬುದನ್ನು ನಿರ್ಮಾಪಕರಿಗೆ ಖಚಿತ ಪಡಿಸುವುದು.

(c) ಕಲಂ ಬಿ ಯಲ್ಲಿ ಉಲ್ಲೇಖಿಸಿರುವ ಮುಚ್ಚಳಿಕೆಯು 6 ತಿಂಗಳುವರೆಗೆ ಮಾನ್ಯವಾಗಿರುತ್ತದೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ನಿಬಂಧನೆಗಳನ್ನು ಸುರಕ್ಷತೆ ಮತ್ತು ಮಕ್ಕಳ ದುರುಪಯೋಗ ತಡೆ ಕುರಿತಾದ ಮಾನ್ಯತೆ ಪಡೆದ ಮಾರ್ಗಸೂಚಿಗಳು ಮತ್ತು ಇಂತಹ ಉದ್ದೇಶಗಳಿಗಾಗಿ ಸೂಕ್ತ ಸರ್ಕಾರವು ನಿಗಧಿತವಾಗಿ ಹೊರಡಿಸಿರುವ ಈ ಕೆಳಕಂಡ ಸುರಕ್ಷತಾ ನೀತಿಗಳನ್ನು ಅಳವಡಿಸಿಕೊಂಡಿರುವ ಬಗ್ಗೆ ಸ್ಪಷ್ಟವಾಗಿ ತಿಳಿಸುವುದು.

i. ಮಗುವಿನ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ಖಾತ್ರಿಪಡಿಸುವುದು.
ii. ಮಗುವಿಗೆ ಸಕಾಲಿಕ ಪೌಷ್ಠಿಕ ಆಹಾರ ಒದಗಿಸುವುದು.
iii. ದೈನಂದಿನ ಅಗತ್ಯಗಳಿಗೆ ಸಾಕಾಗುವಷ್ಟು ಸಾಮಾಗ್ರಿಗಳು, ಸ್ವಚ್ಚ ಮತ್ತು ಸುರಕ್ಷಿತವಾದ ಆಶ್ರಯ ಒದಗಿಸುವುದು.
iv. ಶಿಕ್ಷಣದ ಹಕ್ಕು ಸಂರಕ್ಷಣೆ, ಲೈಂಗಿಕ ಅಪರಾಧಗಳಿಂದ ರಕ್ಷಣೆ ಒಳಗೊಂಡಂತೆ ಮಕ್ಕಳ ರಕ್ಷಣೆ ಕುರಿತಾಗಿ ಕಾಲ ಕಾಲಕ್ಕೆ ಜಾರಿಯಲ್ಲಿರುವ ಎಲ್ಲಾ ಕಾನೂನುಗಳ ಪಾಲನೆ ಮಾಡುವುದು.

(d) ಮಗು ಶಾಲೆಯ ಪಾಠ ಪ್ರವಚನಗಳಿಗೆ ಗೈರಾಗದಂತೆ ಶಿಕ್ಷಣದಲ್ಲಿ ನಿರಂತರವಾಗಿ ಮುಂದುವರೆಯಲು ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವುದನ್ನು ಖಾತರಿಪಡಿಸುವುದು ಮತ್ತು ಯಾವುದೇ ಮಗು ನಿರಂತರವಾಗಿ 27 ದಿನಗಳಿಗಿಂತ ಹೆಚ್ಚಿನ ದಿನಗಳು ನಟನಾ ಕೆಲಸದಲ್ಲಿ ತೂಡಗಲು ಅವಕಾಶ ನೀಡಬಾರದು.

(e) ಮಗುವಿನ ರಕ್ಷಣೆ, ಪೋಷಣೆ ಮತ್ತು ಹಿತಾಸಕ್ತಿಯನ್ನು ಕಾಪಾಡಲು ನಿರ್ಮಾಣ ಅಥವಾ ಕಾರ್ಯಕ್ರಮದಲ್ಲಿ ತೊಡಗಿರುವ ಪ್ರತಿ 5 ಮಕ್ಕಳಿಗೆ ಒಬ್ಬರಂತೆ ಜವಬ್ದಾರಿ ವ್ಯಕ್ತಿಯನ್ನು ನೇಮಿಸುವುದು.

(f) ನಿರ್ಮಾಣ ಅಥವಾ ಕಾರ್ಯಕ್ರಮದಿಂದ ಮಗುವಿಗೆ ಬರುವ ಒಟ್ಟು ಆದಾಯದ ಕನಿಷ್ಠ ಶೇ.20% ನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಮಗುವಿನ ಹೆಸರಿನಲ್ಲಿ ನಿಶ್ಚಿತ ಠೇವಣಿ ಖಾತೆ ತೆರೆದು ಇಡಬೇಕು ಅದನ್ನು ಮಗು ಪ್ರಾಯಸ್ಥನಾದಾಗ ಪಡೆಯಲು ಅವಕಾಶ ಕಲ್ಪಿಸುವುದು.

(g) ಯಾವುದೇ ಮಗುವಿನ ಒಪ್ಪಿಗೆ ಮತ್ತು ಇಚ್ಚೆಗೆ ವಿರುದ್ಧವಾಗಿ ಯಾವುದೇ ಧ್ವನಿ, ದೃಶ್ಯ ಮತ್ತು ಕ್ರೀಡಾ ಚಟುವಟಿಕೆ ಅನೌಪಚಾರಿಕ ಮನರಂಜನಾ ಚಟುವಟಿಕೆ ಒಳಗೊಂಡಂತೆ ಅವುಗಳಲ್ಲಿ ಭಾಗವಹಿಸುವಂತೆ ಮಾಡಬಾರದು.

ಮೇಲ್ಕಂಡಂತೆ ಕೇಂದ್ರ ಸರ್ಕಾರದ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕರ್ನಾಟಕ ನಿಯಮಗಳು 2ಸಿ ರಲ್ಲಿ ಒಬ್ಬ ಕಲಾವಿದನಾಗಿ ಕೆಲಸ ಮಾಡಬೇಕಾದ ಮಗು(1) ಕಲಂ 3ರ ನಿಬಂಧನೆಗಳ ವಿಷಯದಲ್ಲಿ ಮೇಲ್ಕಂಡ ಪರಿಸ್ಥಿತಿಗಳಿಗೆ/ನಿಯಮಗಳಿಗೆ ಒಳಪಟ್ಟಂತೆ ಮಗುವನ್ನು ಕಲಾವಿದನಾಗಿ ನಟನಾ ಕೆಲಸ ಮಾಡಲು ಅನುಮತಿಸಬಹುದಾಗಿದ್ದು, ಮೇಲ್ಕಂಡ ಅಂಶಗಳ ಕುರಿತು ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಿದೆ.

ಆಯುಕ್ತರು
ಕಾರ್ಮಿಕ ಇಲಾಖೆ

**ಇವರಿಗೆ,**

1. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ (ಇನ್ ಫೆಂಟ್ರಿ ರಸ್ತೆ) ಬೆಂಗಳೂರು 560001
2. ವ್ಯವಸ್ಥಾಪಕ ನಿರ್ದೇಶಕರು, ಶ್ರೀ ಕಂಠೀರವ ಸ್ಟುಡಿಯೊ ನಿಗಮ ನಿಯಮಿತ, ಕಂಠೀರವ ನಗರ, ನಂದಿನಿ ಲೇಔಟ್,ಬೆಂಗಳೂರು 560096
3. ರಿಜಿಸ್ಟರ್, ಕರ್ನಾಟಕ ಚಲನಚಿತ್ರ ಅಕಾಡೆಮಿ, ಕನ್ನಡ ಚಲನಚಿತ್ರ ಅಮೃತೋತ್ಸವ ಭವನ ಕಾಂಪ್ಲೆಕ್ಸ್,#20/ಂ, ನಂದಿನಿ ಲೇಔಟ್, ಬೆಂಗಳೂರು 560096.
4. ಕಾರ್ಯದರ್ಶಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿ.ವಿ.ಕೇಂದ್ರ, ಡಾ.ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು 560001
5. ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ, ನಂ. 28, ಕ್ರೆಸೆಂಟ್ ರಸ್ತೆ, ಬೆಂಗಳೂರು 560001 (ಗುರುರಾಜ ಕಲ್ಯಾಣ ಮಂಟಪ ಮತ್ತು ಶಿವಾನಂದ ವೃತ್ತದ ಪಕ್ಕ)

**ಪ್ರತಿಯನ್ನು,**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
2. ಎಲ್ಲಾ ಉಪ ಕಾರ್ಮಿಕ ಆಯುಕ್ತರು
3. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು
4. ಎಲ್ಲಾ ಕಾರ್ಮಿಕ ಅಧಿಕಾರಿಗಳು

## FORMC

[ See Rule 2C(1)(b)]

Undertaking under rule 2C(1)(b) of the
Child and Adolescent Labour (Prohibition and Regulation) Rules, 1988

I ………………………………………….. producer of ……………………… an audio visual media production or organiser of …………………………………… a commercial event, involving the participation of the following child/children, namely:-

| S.No. | Name of the Child/ Children | Parent‘s/Guardian‘s Name | Address |
|---|---|---|---|

do hereby undertake that in the course of the involvement of the above mentioned child/children in the event…………………………………. .(specify the event), there shall be no violation of any of the provisions of the Child and Adolescent Labour (Prohibition and Regulation) Act, 1986 (61 of 1986) and the Child and Adolescent Labour (Prohibition and Regulation) Rules, 1988 and full care shall be taken of the physical and mental health, and other requirements of the child/children, so that he/they feel no inconvenience. I also undertake that during the event, all laws applicable for the time being in force for the protection of children, including their right to education, care and protection, and legal provisions against sexual offences will becomplied.

Dated:……………….. Name and signature of the Producer

**Note.-** The principal rules were published in the Gazette of India, Extraordinary, Part II, section 3, sub-section (i) vide G.S.R 847(E), dated the 10th August, 1988.